## 14. ಪ್ರಕೋಪ ತೋರಿದ ನಿಸರ್ಗ

ರಾಷ್ಟ್ರದ ವಾಣಿಜ್ಯ ನಗರಿ ಮುಂಬೈ ಕೊರೊನಾ ಹೊಡೆತದಿಂದ ಸುಧಾರಿಸಿಕೊಳ್ಳುವ ಮೊದಲೇ, ನಿಸರ್ಗ ಚಂಡಮಾರುತ ದೊಡ್ಡ ಪ್ರಮಾಣದಲ್ಲಿಯೇ ದೇಶದ ಕರಾವಳಿಗೆ ಅಪ್ಪಳಿಸಿದ್ದು ಭಾರಿ ಅನಾಹುತ ಸೃಷ್ಟಿಸಿದೆ. ಮುಂಬೈ, ಪುಣೆಯಲ್ಲಿ ಸೈಕ್ಲೋನ್ ಎಫೆಕ್ಟ್ ಭಾರಿ ಪ್ರಮಾಣದಲ್ಲಿ ಕಾಣಿಸಿಕೊಳ್ಳುವ ಮೂಲಕ, ಜನ ಜೀವನ ಸಂಪೂರ್ಣ ಅಸ್ತವ್ಯಸ್ತವಾಯಿತು. ಅರಬ್ಬಿ ಸಮುದ್ರದಲ್ಲಿ ಉಂಟಾಗಿರುವ ನಿಸರ್ಗ ಚಂಡಮಾರುತ ತೀವ್ರ ಸ್ವರೂಪ ಪಡೆದುಕೊಂಡು ರಾಜ್ಯದ ಸಮುದ್ರ ತೀರವನ್ನು ಅಪ್ಪಳಿಸಿದ್ದು, ಮಹಾರಾಷ್ಟ್ರದ ರಾಯಗಢ ಜಿಲ್ಲೆಯ ಅಲಿಬಾಗ್ ಸಮೀಪದಲ್ಲಿ ತೀರ ದಾಟುವ ಪ್ರಕ್ರಿಯೆ ಮುಂದುವರಿಸಿದೆ. ಮುಂದಿನ ಆರು ಗಂಟೆಗಳಲ್ಲಿ ಚಂಡಮಾರುತದ ತೀವ್ರತೆ ದುರ್ಬಲಗೊಳ್ಳುವ ಸಾಧ್ಯತೆಯಿದೆ ಎಂದು ಮುನ್ಸೂಚನೆ ನೀಡಿದೆ. ಚಂಡಮಾರುತ ಹಿನ್ನೆಲೆಯಲ್ಲಿ ಮಹಾರಾಷ್ಟ್ರ, ಗುಜರಾತ್ ರಾಜ್ಯಗಳು ಕಟ್ಟೆಚ್ಚರ ವಹಿಸಿವೆ. ತೀರ ದಾಟುವ ಸಮಯದಲ್ಲಿ 90 ರಿಂದ 110 ಕಿಮೀ ವೇಗದಲ್ಲಿ ಬಿರುಗಾಳಿ ಬೀಸುವ ಸಾಧ್ಯತೆಯಿದೆ ಎಂದು ಅಂದಾಜಿಸಿದ್ದು, ಈ ಸಮಯದಲ್ಲಿ ಭಾರಿ ಮಳೆ ಸುರಿಯಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಈ ಹಿನ್ನೆಲೆಯಲ್ಲಿ ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯಾ (ಎನ್‌ಡಿಆರ್‌ಎಫ್) ಪಡೆಗಳು ರಂಗಕ್ಕೆ ಇಳಿದಿವೆ.

**ಮುಂಬೈನಲ್ಲಿ ನಿಷೇದಾಜ್ಞೆ:** ಮುಂಬೈನಲ್ಲಿ ಈಗಾಗಲೇ 144 ಸೆಕ್ಷನ್ ವಿಧಿಸಲಾಗಿದೆ. ಎರಡು ದಿನಗಳ ಕಾಲ ಮನೆಗಳಿಂದ ಹೊರಬರದಂತೆ ಎಚ್ಚರಿಕೆ ನೀಡಲಾಗಿದೆ. ಮುಂಬೈ ವಿಮಾನ ನಿಲ್ದಾಣದಲ್ಲಿ ಐ ಅಲರ್ಟ್ ಘೋಷಿಸಲಾಗಿದೆ. ಕಳೆದ ಎರಡು ದಿನಗಳಿಂದ ಸುರಿಯುತ್ತಿರುವ ಮಳೆಯಿಂದಾಗಿ ಪುಣೆಯ ತಗ್ಗು ಪ್ರದೇಶಗಳು ಜಲಾವೃತಗೊಂಡಿವೆ. ಮಹಾರಾಷ್ಟ್ರದ ರಾಯಗಢ, ರತ್ನಗಿರಿ, ಪಲ್ಘರ್, ಸಿಂಧು ದುರ್ಗ್, ಥಾಣೆ ಜಿಲ್ಲೆಗಳಲ್ಲಿ ಚಂಡಮಾರುತದ ಪರಿಣಾಮ ಅಧಿಕವಾಗಿರುತ್ತದೆ ಎಂದು ಅಧಿಕಾರಿಗಳು ಅಂದಾಜಿಸಿದ್ದು, ರಾಯಗಢ ಜಿಲ್ಲೆಯಲ್ಲಿ ಈವರೆಗೆ 13 ಸಾವಿರ ಮಂದಿಯನ್ನು ಸುರಕ್ಷಿತ ಸ್ಥಳಗಳಿಗೆ ರವಾನಿಸಿದ್ದಾರೆ. ಗುಜರಾತ್ ನವಸಾರಿ ಜಿಲ್ಲೆಯ 7 ಗ್ರಾಮಗಳ ಜನರನ್ನು ತೆರವುಗೊಳಿಸಿದ್ದಾರೆ. ನೆರವಿನ ಕಾರ್ಯಗಳಿಗಾಗಿ ವಿಜಯವಾಡ ಸೇರಿದಂತೆ ಹಲವು ಪ್ರದೇಶಗಳಿಂದ ಎನ್‌ಡಿಆರ್‌ಆಫ್ ಪಡೆಗಳನ್ನು ಮಹಾರಾಷ್ಟ್ರಕ್ಕೆ ರವಾನಿಸಲಾಗಿದೆ.

ಮಹಾರಾಷ್ಟ್ರದಿಂದ ಚಂಡಮಾರುತದ ಎಫೆಕ್ಟ್ ಗುಜರಾತ್‌ನತ್ತ ತಿರುಗುವ ಸಾಧ್ಯತೆಯಿರುವುದರಿಂದ ಗುಜರಾತ್ ಸರ್ಕಾರ ಸಹ ಕಟ್ಟೆಚ್ಚರವಹಿಸಿದ್ದು, ತೀರ ಪ್ರದೇಶಗಳ ಜಿಲ್ಲೆಗಳಿಂದ 78 ಸಾವಿರ ಮಂದಿ ಜನರನ್ನು ಸುರಕ್ಷಿತ ಪ್ರದೇಶಗಳಿಗೆ ಕಳುಹಿಸಿದ್ದಾರೆ. ಚಂಡಮಾರುತ ತೀವ್ರತೆ ಕಡಿಮೆ ಇರಲಿದೆ ಎಂಬ ಮುನ್ಸೂಚನೆ ಹಿನ್ನೆಲೆಯಲ್ಲಿ ಸೂಕ್ತ ಮುನ್ನೆಚ್ಚರಿಕೆ ಕೈಗೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿರುತ್ತಾರೆ.

ಚಂಡಮಾರುತ ಹಿನ್ನೆಲೆಯಲ್ಲಿ ಈಗಾಗಲೇ ಹಲವು ರೈಲುಗಳನ್ನು ರದ್ದುಪಡಿಸಲಾಗಿದೆ. ಮತ್ತಷ್ಟು ರೈಲುಗಳ ಮಾರ್ಗ ಬದಲಿಸಲಾಗಿದೆ. ಮುಂಬೈ ಸಮುದ್ರ ತೀರದಲ್ಲಿ ಸಂಚಾರ ಸಂಪೂರ್ಣವಾಗಿ ನಿಷೇಧಿಸಲಾಗಿದೆ. ವಿಪತ್ತು ಎದುರಿಸಲು ನೆರವಿಗಾಗಿ ಪಶ್ಚಿಮ ನೌಕಾದಳವನ್ನು ಸಹ ವ್ಯವಸ್ಥೆ ಮಾಡಲಾಗಿದೆ. ನಾಗರಿಕ ವಿಮಾನಯಾನ ಮಹಾನಿರ್ದೇಶಕರು ಎಚ್ಚರಿಕೆಗಳ ಬಗ್ಗೆ ವಿಮಾನಯಾನ ಸಂಸ್ಥೆಗಳು, ಪೈಲೆಟ್‌ಗಳಿಗೆ ಮಾರ್ಗಸೂಚಿ ಜಾರಿಗೊಳಿಸಿದ್ದಾರೆ.

**ಮಹಾರಾಷ್ಟ್ರಕ್ಕೆ ನಿಸರ್ಗ ಮಾರುತ: ಕರ್ನಾಟಕದಲ್ಲಿ ಹೈ ಅಲರ್ಟ್:**

ನಿಸರ್ಗಕ್ಕೆ ತತ್ತರಿಸಿರುವ ಮಹಾರಾಷ್ಟ್ರದಿಂದ ಎಚ್ಚೆತ್ತುಕೊಂಡಿರುವ ಕರ್ನಾಟಕ, ಕರಾವಳಿ ಭಾಗದಲ್ಲಿ ಹೈ ಅಲರ್ಟ್ ಘೋಷಿಸಿದೆ. ರಾಜ್ಯದಲ್ಲಿ 100-110 ಕಿ.ಮೀ. ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆಯಿದೆ. ಆದ್ದರಿಂದ ಕರ್ನಾಟಕ ಕರಾವಳಿ ಭಾಗದಲ್ಲೂ ಹೈ ಅಲರ್ಟ್ ಘೋಷಣೆ ಮಾಡಲಾಗಿದೆ. ಬೆಳಗ್ಗೆ 5.30ಕ್ಕೆ ನಿಸರ್ಗ ಚಂಡಮಾರುತ ತೀವ್ರತೆ ಪಡೆದುಕೊಂಡಿದೆ. ಈ ಸೈಕ್ಲೋನ್ ಗಂಟೆಗೆ 120 ಕಿ.ಮೀ. ವೇಗ ಪಡೆದುಕೊಳ್ಳುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಎಚ್ಚರಿಸಿದೆ. ಹೀಗಾಗಿ, ಮುಂಬೈ ಹಾಗೂ ಸುತ್ತಮುತ್ತ ಭಾಗದಲ್ಲಿ ಭಾರೀ ಹಾನಿ ಸೃಷ್ಟಿಯಾಗಬಹುದೆಂದು ಹೆಚ್ಚಿನ ಮುಂಜಾಗ್ರತೆ ಕೈಗೊಳ್ಳಲಾಗಿದೆ. ಮೀನುಗಾರರಿಗೆ ಸಮುದ್ರಕ್ಕೆ ಇಳಿಯದಂತೆ ಸೂಚಿಸಲಾಗಿದೆ. ಕಾರವಾರ, ಕುಮಟಾ, ಉಡುಪಿ, ಮಂಗಳೂರು ಭಾಗದಲ್ಲಿ ನಿಸರ್ಗ

ಚಂಡಮಾರುತದ ಎಫೆಕ್ಟ್ ಕೊಂಚ ಪ್ರಮಾಣದಲ್ಲಿ ಇರಲಿದೆ. ಕರಾವಳಿ ಭಾಗದಲ್ಲಿ ಭಾರಿ ಮಳೆ ಆಗುತ್ತಿದ್ದು, ಈ ಮಳೆ ಮುಂದುವರಿಯಲಿದೆ ಎಂದು ತಿಳಿದುಬಂದಿದೆ.

ಆಧಾರ:ಸಂಯುಕ್ತ ಕರ್ನಾಟಕ, ದಿನಾಂಕ: 04.06.2020